# ನಮ್ಮ ನಡೆ, ಮತಗಟ್ಟೆ ಕಡೆ ಅಭಿಯಾನವು ಮತದಾರರನ್ನು ತಲುಪಲಿ

## ಮತ ಚಲಾಯಿಸಿ ಪ್ರಜಾತಂತ್ರದ ಆಶಯ ಉಳಿಸಿ: ಜಿಲ್ಲಾಧಿಕಾರಿ ನಲಿನ್ ಅತುಲ್



ಕೊಪ್ಪಳ ಏಪ್ರಿಲ್–: ನಗರದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಕಚೇರಿ ಆವರಣದಲ್ಲಿ ಲೋಕಸಭಾ ಚುನಾವಣೆ ಅಂಗವಾಗಿ ನಡೆಯುತ್ತಿರುವ ನಮ್ಮ ನಡೆ, ಮತಗಟ್ಟೆ ಕಡೆ ಅಭಿಯಾನದ ಧ್ವಜಾರೋಹಣವನ್ನು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ನೆರವೇರಿಸಿದರು.

ನಂತರ ಅವರು ಮಾತನಾಡಿ ಮೇ 7ರಂದು ನಡೆಯುವ ಲೋಕಸಭಾ ಚುನಾವಣೆ ಅಂಗವಾಗಿ ಉತ್ತಮ ಭವಿಷ್ಯಕ್ಕಾಗಿ ಮತದಾನ ನಮಗಿರುವ ಅಮೂಲ್ಯವಾದ ಮತದಾನದ ಹಕ್ಕನ್ನು ಉತ್ತಮ ರೀತಿಯಲ್ಲಿ ಸದುಪಯೋಗ ಪಡಿಸಿಕೊಳ್ಳಬೇಕು. ದೇಶದ ಅಭಿವೃದ್ಧಿಯಲ್ಲಿ ಸಹಭಾಗಿತ್ವ ಮತದಾನ ಪ್ರಜಾಪ್ರಭುತ್ವದ ಮೂಲಭೂತ ಹಕ್ಕು. ಅದಕ್ಕಾಗಿ ನಮ್ಮ ನಡೆ, ಮತಗಟ್ಟೆ ಕಡೆ ಅಭಿಯಾನವನ್ನು ಜಿಲ್ಲೆಯ 1317 ಬೂತ್ ಗಳಲ್ಲಿ ನಡೆಸಲಾಗುತ್ತಿದೆ. ಮತಗಟ್ಟೆಗಳ ಮೇಲೆ ಮೇ 7ರ ವರೆಗೆ ಧ್ವಜ ಏರಿಸಬೇಕು. ನಮ್ಮ ನಡೆ, ಮತಗಟ್ಟೆ ಕಡೆ ಅಭಿಯಾನವನ್ನು ಆಚರಿಸಿ ಪ್ರಜಾಪ್ರಭುತ್ವವನ್ನು ಉಳಿಸಿ ಬೆಳೆಸಿ ಗಟ್ಟಿಗೊಳಿಸಲು ಪ್ರಜೆಗಳ ಪ್ರತ್ಯಕ್ಷ ಪಾಲ್ಗೊಳ್ಳುವಿಕೆ ನಿರಂತರವಾಗಿ ಇರಬೇಕು ಎಂದರು.

ಚುನಾವಣೆ ನಡೆದಾಗ ಮತಗಟ್ಟೆಗೆ ಬಂದು ಮತದಾನ ಮಾಡುವುದು ಅದರಲ್ಲಿ ಕಣ್ಣಿಗೆ ಕಾಣುವ ಒಂದು ಸಣ್ಣ ಸಂಕೇತ, ಇದರ ಪರಿಣಾಮ ಮಾತ್ರ ಬಹಳ ದೊಡ್ಡದು. ಚುನಾವಣೆ ಕೆಲಸದಲ್ಲಿ ಬಿಎಲ್ ಓ ಗಳ ಕಾರ್ಯ ಅತೀ ಮುಖ್ಯವಾಗಿರುತ್ತದೆ. ಎಲ್ಲರೂ ಮತಗಟ್ಟೆಗಳನ್ನು ಮತದಾರರಿಗೆ ಪರಿಚಯಿಸಬೇಕು. ಶೇ.100 ರಷ್ಟು ಮತದಾನ ಆಗಲು ಕಾರ್ಯನಿರ್ವಹಿಸಬೇಕು . ಎಲ್ಲ ಮತಗಟ್ಟೆಗಳಲ್ಲಿ ಧ್ವಜಾರೋಹಣ ನಡೆಸಿ ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದರು.

ಪ್ರತಿಜ್ಞಾ ವಿಧಿ ಸ್ವೀಕಾರ: ಕಾರ್ಯಕ್ರಮದ ಅಂಗವಾಗಿ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ ಅವರು ಮತದಾನ ಜಾಗೃತಿ ಪ್ರತಿಜ್ಞಾ ವಿಧಿ ಬೋಧಿಸಿದರು. ಇದೆ ವೇಳೆ ನೆರೆದಿದ್ದ ಎಲ್ಲರೂ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ಚುನಾವಣಾ ಜಿಲ್ಲಾ ರಾಯಭಾರಿಗಳಾದ ಪೂರ್ಣಿಮ ವಿಳುಭಾವಿ ಅವರು ಮಾತನಾಡಿ, ವಿಶೇಷಚೇತನರ ಪ್ರತಿನಿಧಿಯಾಗಿ ನನ್ನನ್ನು ರಾಯಭಾರಿಯನ್ನಾಗಿ ಮಾಡಲಾಗಿರುತ್ತದೆ. ಚಲನ ವಲನದ ತೊಂದರೆ ಇರುವವರು ಈಗಾಗಲೇ ಮನೆಯಿಂದ ಮತದಾನ ಮಾಡಿರುತ್ತಾರೆ. ಉಳಿದ ವಿಶೇಷ ಚೇತನರು ಮತಗಟ್ಟೆಗೆ ಹೋಗಿ ಮತ ಹಾಕಲು ಬಹಳ ಉತ್ಸುಕರಾಗಿರುತ್ತಾರೆ. ಅವಿದ್ಯಾವಂತರಿಗಿಂತ ವಿದ್ಯಾವಂತ ವರ್ಗವೇ ಮತದಾನದಿಂದ ದೂರ ಉಳಿಯುತ್ತಾರೆ ಎಂಬ ಅಪವಾದ ಇದೆ. ಇದನ್ನು ತೆಗೆದುಹಾಕಿ ಮೇ 7 ರಂದು ಕೇವಲ ಐದು ನಿಮಿಷ ಮತಗಟ್ಟೆಗೆ ಬಂದು ನಿರ್ಭೀತಿಯಿಂದ, ಪ್ರಾಮಾಣಿಕವಾಗಿ ಮತ ಚಲಾಯಿಸೋಣ. ಯಾವುದೇ ಆಸೆ ಆಮಿಷಕ್ಕೆ ಒಳಗಾಗದೇ ಯೋಗ್ಯ ವ್ಯಕ್ತಿಯನ್ನು ಆಯ್ಕೆ ಮಾಡೋಣ. ಈ ಮೂಲಕ ನಮ್ಮ ದೇಶದ ಬಹುದೊಡ್ಡ ವ್ಯವಸ್ಥೆಯಾದ ಪ್ರಜಾಪ್ರಭುತ್ವದ ಘನತೆಯನ್ನು ಎತ್ತಿಹಿಡಿಯೋಣ ಎಂದರು.

ಜಿಲ್ಲೆಯ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡ ಜಲಪದ ಕಲಾವಿದರಾದ & ಜಿಲ್ಲಾ ಸ್ವೀಪ್ ಐಕಾನ್ ರಾದ ಮೆಹಬೂಬ್ ಕಿಲ್ಲೇದಾರ್ ರವರು ಇದೀಗ ದೇಶ ಸೇವೆ ಮಾಡುವ ಅವಕಾಶ ಒದಗಿ ಬಂದಿದೆ. ಮತದಾರರು ಯಾವುದೇ ಆಸೆ, ಆಮೀಷಕ್ಕೆ ಬಲಿಯಾಗದೆ ಮತದಾನ ಮಾಡಬೇಕು.

ಮತದಾನ ಪ್ರಕ್ರಿಯೆಯಿಂದ ದೂರ ಉಳಿಯಬಾರದು. ಮತದಾನ ಪ್ರಮಾಣ ಹೆಚ್ಚಳವಾಗಲು ಶ್ರಮಿಸುವಂತೆ ಮತದಾನ ಜಾಗೃತ ಗೀತೆಯನ್ನು ಪ್ರಸ್ತುತಪಡಿಸಿದರು.

ನಮ್ಮ ನಡೆ ಮತಗಟ್ಟೆ ಕಡೆ ಕಾರ್ಯಕ್ರಮದ ವಿಶೇಷತೆ: ಕೊಪ್ಪಳ ನಗರದ ಪಂ.ರಾಜ್ ವಿಭಾಗದ ಮಹಿಳೆಯರ ಸಂಖ್ಯೆ ಹೆಚ್ಚಿರುವ ಬೂತ್ ಸಂಖ್ಯೆ– 113ರಲ್ಲಿ ಸಖಿ ಮತಗಟ್ಟೆ ಯನ್ನು ಮದುವಣಗಿತ್ತಿಯಂತೆ ಸಿಂಗಾರಗೊಳಿಸಲಾಗಿತ್ತು.

ಚಿತ್ತಾಕರ್ಷವಾಗಿ ವರ್ಲಿ ಆರ್ಟ್ ನಿಂದ ಕಂಗೋಳಿಸಿತು. ಮಹಿಳಾ & ಮಕ್ಕಳ ಕಲ್ಯಾಣ ಇಲಾಖೆಯ ಮಹಿಳಾ ಸಿಬ್ಬಂದಿಗಳಿಂದ ಮತದಾನ ಜಾಗೃತಿಯ ರಂಗೋಲಿಯನ್ನು ಬಿಡಿಸಲಾಗಿತ್ತು.ಬೂತ್ ನಿಂದ ಗಡಿಯಾರ ಕಂಬದವರೆಗೆ ಮತದಾನ ಜಾಗೃತಿ ವಾಹನದೊಂದಿಗೆ ಪೌರಕಾರ್ಮಿಕರು ವಾಕಥಾನ್ ಮಾಡಿ ಮೇ 7ರಂದು ತಪ್ಪದೇ ಮತದಾನ ಮಾಡುವಂತೆ ಘೋಷಣೆ ಮುಖಾಂತರ ಮತದಾರರಿಗೆ ಜಾಗೃತಿ ಮೂಡಿಸಿದರು. ಅಧಿಕಾರಿಗಳಿಂದ & ಮತದಾರರಿಂದ ಸಹಿ ಸಂಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ದುಂಡಪ್ಪ ತುರಾದಿ,ನಗರಸಭೆ ಪೌರಾಯುಕ್ತರಾದ ಗಣಪತಿ ಪಾಟೀಲ್ ಅಆಇಟಿ ಜಯಶ್ರೀ, ತಾ.ಪಂ./ನಗರ ಸಭೆ/ ಪಂ.ರಾಜ್ ಇಲಾಖೆ ಅಧಿಕಾರಿಗಳು & ಸಿಬ್ಬಂದಿಗಳು & ಪೌರಕಾರ್ಮಿಕರು ಹಾಜರಿದ್ದರು.

# ಪತ್ರಕರ್ತರೊಂದಿಗೆ ಕ್ರಿಕೆಟ್ ಆಡಿದ ಸಿಇಓ, ಎಸಿ ಮತದಾನ ಜಾಗೃತಿ ಮೂಡಿಸಲು ತಾಲೂಕು ಸ್ವೀಪ್ ಸಮಿತಿಯಿಂದ

## ಕ್ರಿಕೆಟ್ ಪಂದ್ಯ ಆಯೋಜನೆ ಅಧಿಕಾರಿಗಳು, ಪತ್ರಕರ್ತರಿಂದ ಉತ್ತಮ ಬೌಲಿಂಗ್, ಬ್ಯಾಟಿಂಗ್ , ಫೀಲ್ಡಿಂಗ್ ಪ್ರದರ್ಶನ



ಕೊಪ್ಪಳ ಏಪ್ರಿಲ್–: ಲೋಕಸಭಾ ಚುನಾವಣೆ ಅಂಗವಾಗಿ ಜನರಲ್ಲಿ ಮತದಾನ ಜಾಗೃತಿ ಮೂಡಿಸಲು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ, ಉಪವಿಭಾಗದ ಅಧಿಕಾರಿಗಳಾದ ಕ್ಯಾಪ್ಟೆನ್ ಮಹೇಶ ಮಾಲಗಿತ್ತಿ ನೇತೃತ್ವದ ಅಧಿಕಾರಿಗಳ ತಂಡ & ಪತ್ರಕರ್ತರ ಕ್ರಿಕೆಟ್ ಪಂದ್ಯ ಎಲ್ಲರ ಗಮನಸೆಳೆಯಿತು.

ಗಂಗಾವತಿ ನಗರದ ಬಸವಲಿಂಗಪ್ಪ ಸ್ಕೂಲ್ ಮೈದಾನ ಆವರಣದಲ್ಲಿ ತಾಲೂಕು ಸ್ವೀಪ್ ಸಮಿತಿಯಿಂದ ಭಾನುವಾರ ಆಯೋಜಿಸಿದ್ದ ಅಧಿಕಾರಿಗಳು ಮತ್ತು ಪತ್ರಕರ್ತರ ನಡುವೆ ನಡೆದ ಕ್ರಿಕೆಟ್ ಪಂದ್ಯವನ್ನು ಜಿಪಂ ಸಿಇಓ ಅವರು ಟಾಸ್ ಮಾಡುವ ಮೂಲಕ ಉದ್ಘಾಟಿಸಿದರು.ಜಿ.ಪಂ. ಸಿಇಓ ರಾಹುಲ್ ರತ್ನಂ ಪಾಂಡೆಯ ಅವರು ಮಾತನಾಡಿ, ಲೋಕಸಭಾ ಚುನಾವಣೆಯಲ್ಲಿ ಹೆಚ್ಚಿನ ಮತದಾನವಾಗಲು ಸ್ವೀಪ್ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಪ್ರತಿಯೊಬ್ಬರೂ ತಪ್ಪದೇ ಮತದಾನ ಮಾಡಬೇಕು. ಚುನಾವಣೆ ಹಬ್ಬದಲ್ಲಿ ಎಲ್ಲರೂ ಖುಷಿಯಿಂದ ಪಾಲ್ಗೊಳ್ಳಬೇಕು. ಮತ ಚಲಾಯಿಸಲು ಯಾರೂ ಕೂಡ ನಿರ್ಲಕ್ಷ್ಯ ತೋರಬಾರದು. ಯುವಕರು ಕ್ರಿಕೆಟ್ ಪ್ರೇಮಿಗಳಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಯುವ ಮತದಾರರನ್ನು ಸೆಳೆಯಲು ಕ್ರಿಕೆಟ್ ಪಂದ್ಯ ಆಯೋಜಿಸಲಾಗಿದೆ ಎಂದರು.ಜಿ.ಪಂ. ಸಿಇಓ ರಾಹುಲ್ ರತ್ನಂ ಪಾಂಡೆಯ, ಎಸಿ ಕ್ಯಾಪ್ಟೆನ್ ಮಹೇಶ ಮಾಲಗಿತ್ತಿ, ಚುನಾವಣಾ ಜಿಲ್ಲಾ ರಾಯಭಾರಿಗಳಾದ ಡಾ.ಶಿವಕುಮಾರ್ ಮಾಲಿಪಾಟೀಲ್ ಅವರು ಬ್ಯಾಟಿಂಗ್, ಬೌಲಿಂಗ್ ,ಫೀಲ್ಡಿಂಗ್ ಮೂಲಕ ಎಲ್ಲರ ಗಮನ ಸೆಳೆದರು. ಜೊತೆಗೆ ಅಧಿಕಾರಿಗಳೊಂದಿಗೆ ದಿನಪತ್ರಿಕೆ, ಟಿವಿ ಮಾಧ್ಯಮದ ಪತ್ರಕರ್ತರು ಉತ್ತಮ ಬೌಲಿಂಗ್, ಬ್ಯಾಟಿಂಗ್ ಮಾಡಿದರು. ಅಧಿಕಾರಿಗಳ ತಂಡ 10 ಓವರ್ ಗಳಲ್ಲಿ ಎರಡು ವಿಕೆಟ್ ನಷ್ಟಕ್ಕೆ 99 ರನ್ ಗಳಿಸಿತು. ಗುರಿ ಬೆನ್ನಟ್ಟಿದ ಪತ್ರಕರ್ತರ ತಂಡ 78 ರನ್ ಗಳಿಸಿತು. ಅಧಿಕಾರಿಗಳ ತಂಡದಲ್ಲಿ ಜಿ.ಪಂ. ಸಿಇಓ ರಾಹುಲ್ ರತ್ನಂ ಪಾಂಡೆಯ ಅವರು ವೈಯಕ್ತಿಕ 38 ರನ್ ಬಾರಿಸಿ ಉತ್ತಮ ಬ್ಯಾಟಿಂಗ್ ಪ್ರದರ್ಶಿಸಿದರು. ಎಸಿ ಕ್ಯಾಪ್ಟೇನ್ ಮಹೇಶ ಮಾಲಗಿತ್ತಿ ಅವರು ಉತ್ತಮ ಬೌಲಿಂಗ್ ಮಾಡಿ ಎರಡು ವಿಕೆಟ್ ಪಡೆದರು.ನಂತರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ್ ರತ್ನಂ ಪಾಂಡೆಯ ಅವರು ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡುವಂತೆ ನೈತಿಕ ಮತದಾನದ ಪ್ರತಿಜ್ಞಾ ವಿಧಿ ಬೋಧಿಸಿದರು.ಈ ಕಾರ್ಯಕ್ರಮದಲ್ಲಿ ಜಿಲ್ಲಾ ಚುನಾವಣಾ ರಾಯಭಾರಿಗಳಾದ ಡಾ. ಶಿವಕುಮಾರ್ ಮಾಲಿ ಪಾಟೀಲ್ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರಾದ ಲಕ್ಷ್ಮೀದೇವಿ, ನಗರಸಭೆ ಪೌರಾಯುಕ್ತರಾದ ವಿರುಪಾಕ್ಷಮೂರ್ತಿ, ವ್ಯವಸ್ಥಾಪಕರು, ಗ್ರಾಪಂ ಪಿಡಿಓಗಳು, ಪತ್ರಕರ್ತರು, ಯುವ ಮತದಾರರು, ಕ್ರೀಡಾಭಿಮಾನಿಗಳು ಹಾಜರಿದ್ದರು.

# ಗೋಕಾಕ ತಾಲೂಕಿನಾದ್ಯಾಂತ ಜಗದೀಶ್ ಶೆಟ್ಟರ್‌ಗೆ ಭರಪೂರ ಬೆಂಬಲ

## ಬೀರು ಬಿಸಿಲು ಲೆಕ್ಕಿಸದೇ ರೋಡ್ ಶೋ ನಲ್ಲಿ ಬಾಗಿಯಾದ ಸಾವಿರಾರು ಜನ

ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಸೋಮವಾರ ಗೋಕಾಕ್ ಮತಕ್ಷೇತ್ರದಲ್ಲಿ ಭರ್ಜರಿ ಪ್ರಚಾರ ನಡೆಸಿದರು. ಬೀರು ಬಿಸಿಲು ಲೆಕ್ಕಿಸದೆ ಸಾವಿರಾರು ಜನರು ಬೃಹತ್ ರೋಡ್ ಶೋ ನಲ್ಲಿ ಭಾಗ ವಹಿಸಿ ಮೋದಿ ಮೋದಿ ಎಂದು ಘೋಷಣೆ ಕೂಗಿ, ಬಿಜೆಪಿ ಅಭ್ಯರ್ಥಿಗೆ ಜಗದೀಶ್ ಶೆಟ್ಟರ್ ಗೆ ಬೆಂಬಲ ಸೂಚಿಸಿದರು.

ಗೋಕಾಕ ಮತ ಕ್ಷೇತ್ರದ ನಭಾಪೂರದಲ್ಲಿ ಖನಗಾಂವ, ಮಿಡಕನಕಟ್ಟಿ, ಶಿಲ್ತಿಭಾಂವಿ, ಮಕ್ಕಳಗೇರಿ, ಕೊಳವಿ, ಬೆಣಚಿನವರ್ಡಿ, ಮೂಲದಿನ್ನಿ, ಮಮದಾಪೂರ, ಹಿರೇನಂದಿ ಗ್ರಾಮಗಳ ಪ್ರಚಾರಾರ್ಥ ಸಮಾರಂಭದಲ್ಲಿ ಭಾಗವಹಿಸಿ, ಮತಯಾಚನೆ ಮಾಡಲಾಯಿತು.

ಇದಕ್ಕೂ ಮುನ್ನ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಹಾಗೂ ಶಾಸಕ ರಮೇಶ ಜಾರಕಿಹೊಳಿ ಬೃಹತ್ ರೋಡ್ ಸೋ ನಡೆಸಿದರು. ಈ ವೇಳೆ ರಸ್ತೆ ಉದ್ದಕ್ಕೂ ಮೋದಿ ಮೋದಿ ಘೋಷಣೆ ಜನರು ಕುಗಿದರು. ಬಂದಿದ ಜನ ಜಗದೀಶ್ ಶೆಟ್ಟರ್ ಪರ ಜೈಕಾರ ಹಾಕಿದರು. ರಸ್ತೆ ಉದಕ್ಕೂ ಪುಷ್ಪ ವೃಷ್ಟಿ ಮಾಡುವ ಮೂಲಕ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಬಳಿಕ ವೇದಿಕೆ ಮೇಲೆ ಭಾಷಣ ಮಾಡಿದ ಜಗದೀಶ ಶೆಟ್ಟರ್ ಅವರು, ಬೆಳಗಾವಿ ಲೋಕಸಭಾ ಕ್ಷೇತ್ರದ ಭಾರತೀಯ ಜನತಾ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿ, ಪ್ರಧಾನಿ ನರೇಂದ್ರ ಮೋದಿಯವರ ಪ್ರತಿನಿಧಿಯಾಗಿ ಸ್ಪರ್ಧೆ ಮಾಡುತ್ತಿದ್ದೇನೆ. ನರೇಂದ್ರ ಮೋದಿಯವರು ಈ ದೇಶದ ಆಸ್ತಿ. ನರೇಂದ್ರ ಮೋದಿಯವರ ತಮ್ಮ ಆಡಳಿತ 10 ವರ್ಷದಲ್ಲಿ ಒಳ್ಳೆಯ ಆಡಳಿತ ನೀಡಿದ್ದಾರೆ. ಯಾವುದೇ ಭ್ರಷ್ಟಾಚಾರ ಇಲ್ಲದೆ ಪಾರದರ್ಶಕವಾದ ಸರ್ಕಾರ ನಡೆಸಿದ್ದಾರೆ. ಒಂದೆ ಒಂದು ಭ್ರಷ್ಟಾಚಾರ ಇಲ್ಲದೆ ಆಡಳಿತ ನಡೆಸಿದ್ದಾರೆ. ವಿರೋಧ ಪಕ್ಷಗಳು ಹೊರಗೆ ಅಷ್ಟೇ ಮೋದಿಯವರು ಟೀಕೆ ಮಾಡುತ್ತಾರೆ. ಆದರೆ ಲೋಕಸಭೆ ಅಥವಾ ರಾಜ್ಯಸಭೆಯಲ್ಲಿ ಭ್ರಷ್ಟಾಚಾರದ ಬಗ್ಗೆ ಟೀಕೆ ಮಾಡಿಲ್ಲ. ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಬಹಳ ದಿನ ಇರುವದಿಲ್ಲ ಎಂದು ಜಗದೀಶ್ ಶೆಟ್ಟರ್ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಶಾಸಕರಾದ ರಮೇಶ ಜಾರಕಿಹೊಳಿ, ಮಾಜಿ ವಿಧಾನಪರಿಷತ್ ಸದಸ್ಯರಾದ ಮಹಾಂತೇಶ ಕವಟಗಿಮಠ, ಜಿಲ್ಲಾಧ್ಯಕ್ಷರಾದ ಸುಭಾಷ ಪಾಟೀಲ, ಮಾಜಿ ಶಾಸಕರಾದ ಎಂ.ಎಲ್. ಮುತ್ತೇಣ್ಣವರ, ಪ್ರಮುಖರಾದ ರಾಜೇಂದ್ರ ಗೌಡಪ್ಪಗೋಳ, ರಾಜು ಮುನವಳ್ಳಿ ಹಾಗೂ ಗುರುಹಿರಿಯರು, ಮಾತೆಯರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಜಿಲ್ಲಾ ಗಾಣಿಗ ಸಮುದಾಯದ ಸಂಪೂರ್ಣ ಬೆಂಬಲ ಪಡೆದ ಜಗದೀಶ್ ಶೆಟ್ಟರ್



ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಹೆಚ್ಚು ಉತ್ಪಾದಕ, ಐಟಿ ಉದ್ದಿಮಗಳನ್ನು ತಂದು, ಹುಬ್ಬಳ್ಳಿ ಮಾದರಿಯಲ್ಲೇ ಬೆಳಗಾವಿ ಜಿಲ್ಲೆಯನ್ನು ಸಮಗ್ರ ಅಭಿವೃದ್ಧಿಯ ಕ್ಷೇತ್ರ ಮಾಡುತ್ತೇನೆ ಎಂದು ಬಿಜೆಪಿ ಅಭ್ಯರ್ಥಿ ಜಗದೀಶ್ವ ಶೆಟ್ಟರ್ ಅವರು ಹೇಳಿದ್ದಾರೆ.

ಲೋಕಸಭಾ ಚುನಾವಣೆ ಪ್ರಚಾರಾರ್ಥವಾಗಿ ಬೆಳಗಾವಿಯ ಖಡೆಬಜಾರ್ ನ ಎಂ.ಜಿ. ಟಾವರ್ ಹತ್ತಿರ ಗಾಣಿಗೇರ ಸಮಾಜದ ಅಭಿವೃದ್ಧಿ ಸಂಘದಲ್ಲಿ "ಗಾಣಗೇರ ಸಮಾಜದ ಬಂಧುಗಳೊಂದಿಗೆ ಸಭೆ ನಡೆಸಿ, ಮತಯಾಚನೆ ಮಾಡಲಾಯಿತು.

ಈ ವೇಳೆ ಮಾತನಾಡಿದ ಬೆಳಗಾವಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ಮೋದಿಯವರು ದೇಶ ಅಲ್ಲಾ ವಿಶ್ವ ಕಂಡ ಮಹಾ ನಾಯಕ, ಕಳೆದ ಹತ್ತು ವರ್ಷದಲ್ಲಿ ಭಾರತವನ್ನು ವಿಶ್ವ ಮಟ್ಟದಲ್ಲಿ ಉನ್ನತ ಸ್ಥಾನದಲ್ಲಿ ನಿಲ್ಲುವಂತೆ ಪ್ರಧಾನಿ ಮೋದಿಯವರು ಮಾಡಿದ್ದಾರೆ.

ದೇಶದ ಭದ್ರತೆ, ಆರ್ಥಿಕ ಪ್ರಗತಿ, ಭ್ರಷ್ಟ ಮುಕ್ತ ಆಡಳಿತ, ವಿವಿಧ ಕ್ಷೇತ್ರಗಳಲ್ಲಿ ಅಭಿವೃದ್ಧಿ ಯೋಜನೆಗಳು, ಅವುಗಳನ್ನು ಕಾರ್ಯರೂಪಕ್ಕೆ ತಂದು ಇಂದು ಭಾರತ ದೇಶವನ್ನು ಬಲಿಷ್ಠ ಮಾಡಿದ್ದು ಇಡೀ ಭಾರತೀಯರು ಹೆಮ್ಮೆ ಪಡೆಬೇಕು ಎಂದು ಹೇಳಿದರು.

ಇನ್ನು ದೇಶ, ಧರ್ಮ, ಸಂಸ್ಕೃತಿ ವಿಚಾರವಾಗಿ ದೇಶ ಕಾಯುವ ಯೋಧನಾಗಿ ಕೆಲಸ ಮಾಡಿದ್ದು, ದೇಶವಾಸಿಗಳ ನೂರಾರು ವರ್ಷದ ಕನಸಾದ ರಾಮ ಮಂದಿರದ ನಿರ್ಮಾಣ, ಬಹುಸಂಖ್ಯಾತರ ರಕ್ಷಣೆ, ಸಾಮಾಜಿಕ, ಧಾರ್ಮಿಕ ಭದ್ರತೆ ನೀಡಿ, ಅನ್ಯರಿಂದ ಆಗುತ್ತಿರುವ ತೊಂದರೆಗಳನ್ನು ತಡೆಹಿಡಿದಿದ್ದು ನಮ್ಮ ಪ್ರಧಾನಿ ಮೋದಿ. ನಮ್ಮ ದೇಶದ ಧೀಮಂತ ಪ್ರಧಾನಿಯವರೂ ಕೂಡಾ ಹಿಂದುಳಿದ ಸಮುದಾಯಕ್ಕೆ ಸೇರಿದ್ದು, ಎಲ್ಲಿಯೂ ಕೂಡಾ ತಾವು ಹಿಂದುಳಿದವರು ಎಂದು ಸೀಮಿತವಾಗಲಿಲ್ಲ, ದೇಶದ ಎಲ್ಲಾ ಜನರ ಅಭಿವೃದ್ಧಿಗಾಗಿ, ದೇಶದ ಸೇವಕನಾಗಿ ದುಡಿದಿದ್ದಾರೆ, ಆಸ್ತಿ ಸಂಪತ್ತು ಮಾಡಲು ಅವರಿಗೆ ಮನೆ, ಮಕ್ಕಳು, ಸಂಬಂಧಗಳು ಇಲ್ಲ. ದೇಶವೇ ಅವರ ಮನೆ ದೇಶದ ಪ್ರಜೆಗಳೇ ಅವರ ಬಂಧುಗಳು, ದೇಶದ ಉದ್ದಾರವೇ ಮೋದಿಜೀ ಅವರ ಕನಸಾಗಿದ್ದು ಅಂತಹ ನಾಯಕರು ನಮ್ಮ ದೇಶಕ್ಕೆ ದೊರಕಿದ್ದು ಭಾರತೀಯರ ಭಾಗ್ಯ ಎಂದು ತಿಳಿಸಿದರು.

ಜನಪ್ರತಿನಿಧಿಯಾಗಿ ಹುಬ್ಬಳ್ಳಿಯನ್ನು ಎಲ್ಲಾ ರೀತಿಯಲ್ಲಿಯೂ ಅಭಿವೃದ್ಧಿ ಮಾಡಿದ್ದೇನೆ. ಅದಕ್ಕಿಂತ ಹೆಚ್ಚಿನ ರೀತಿಯಲ್ಲಿ ಬೆಳಗಾವಿಯನ್ನು ಅಭಿವೃದ್ಧಿ ಮಾಡುವೆ ಎಂದು ಪ್ರಮಾಣ ಮಾಡುತ್ತೇನೆ, ಈಗಾಗಲೇ ದಿ. ಸುರೇಶ್ ಅಂಗಡಿ ಹಾಗೂ ಮಂಗಳ ಅಂಗಡಿ ಅವರ ಅವಧಿಯಲ್ಲಿ ರೈಲ್ವೆ ಹಾಗೂ ವೈಮಾನಿಕ ವಲಯಗಳಲ್ಲಿ ಸಾಕಷ್ಟು ಪ್ರಗತಿ ಆಗಿದ್ದು, ಮುಂದೆ ಇಲ್ಲಿ ವಿವಿಧ ಉತ್ಪಾದಕ ವಿದೇಶಿ ಕಂಪನಿಗಳನ್ನು, ಐಟಿ ಉದ್ದಿಮೆಗಳನ್ನು ತಂದು, ಉದ್ಯೋಗ ಸೃಷ್ಟಿಸಿ, ಜಿಲ್ಲೆಯನ್ನು ಅಭಿವೃದ್ಧಿ ದೃಷ್ಟಿಯಲ್ಲಿ ಮಾದರಿ ಜಿಲ್ಲೆಯಾಗಿ ಮಾಡುತ್ತೇನೆ ಎಂದರು.

ಈ ಸಂದರ್ಭದಲ್ಲಿ ಸಂಸದೆ ಮಂಗಲ ಸುರೇಶ ಅಂಗಡಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಅನಿಲ ಬೆನಕೆ, ಪ್ರಮುಖರಾದ ಪ್ರಕಾಶ ಬಾಳೇಕುಂದ್ರಿ, ಶಂಕರಗೌಡ ಪಾಟೀಲ, ಜಿ.ಎಸ್. ಛಬ್ಬಿ ಹಾಗೂ ಇತರರು ಉಪಸ್ಥಿತರಿದ್ದರು.

# ಅಂಕಲಗಿ ಪಟ್ಟಣದಲ್ಲಿ ಬೃಹತ್ ರೋಡ್ ಶೋ ನಡೆಸಿದ ಜಗದೀಶ್ ಶೆಟ್ಟರ್

## ಚುನಾವಣೆ ಬಳಿಕ ಗ್ಯಾರಂಟಿಗಳು ನಿಲ್ಲಲಿದೆ: ರಮೇಶ್ ಜಾರಕಿಹೊಳಿ



ಬೆಳಗಾವಿ: ಮಹಿಳೆಯರು ಗ್ಯಾರಂಟಿಗೆ ಮರಳಾಗಬೇಡಿ, ಚುನಾವಣೆ ಮುಗಿದ ಬಳಿಕ ಗ್ಯಾರಂಟಿಗಳು ಬಂದ್ ಆಗಲಿದೆ. ಆದರೆ ಮೋದಿಯವರು ಶಾಸ್ವತ ಗ್ಯಾರಂಟಿ ನೀಡುತ್ತಾರೆ. ಕಳೆದ ಬಾರಿ ಲೋಕಸಭಾ ಚುನಾವಣೆ ವೇಳೆ ಗೋಕಾಕ ಕ್ಷೇತ್ರದಿಂದ 50 ಸಾವಿರ ಲೀಡ್ ನೀಡಿದ್ದೇವೆ. ಈ ಬಾರಿ ಜಗದೀಶ್ ಶೆಟ್ಟರ್ ಅವರಿಗೆ 1 ಲಕ್ಷ ಲೀಡ್ ನೀಡುತ್ತೇವೆ. ಜಗದೀಶ್ ಶೆಟ್ಟರ್ ಅವರು ಗೆದ್ದ ಮೇಲೆ ಈ ಭಾಗದಲ್ಲಿ ಸಾಕಷ್ಟು ಅಭಿವೃದ್ಧಿ ಆಗಲಿದೆ ಎಂದು ಶಾಸಕ ರಮೇಶ ಜಾರಕಿಹೊಳಿ ಅವರು ತಿಳಿಸಿದ್ದಾರೆ.ಚುನುವಣಾ ಪ್ರಚಾರ್ಥವಾಗಿ ಗೋಕಾಕ ತಾಲೂಕಿನ ಅಂಕಲಗಿ ಪಟ್ಟಣದಲ್ಲಿ ಸಮಾವೇಶ ಆಯೋಜನೆ ಮಡಾಲಗಿತ್ತು, ಈ ವೇಳೆ ಅಂಕಲಗಿ ಗ್ರಾಮದಲ್ಲಿ ಬೃಹತ್ ರೋಡ್ ಶೋ ನಡೆಸಲಾಯಿತು. ಈ ವೇಳೆ ಸಾವಿರಾರು ಕಾರ್ಯಕರ್ತರು ಭಾಗಿ ಆಗಿದ್ದರು, ಬಳಿಕ ಸಮಾವೇಶದಲ್ಲಿ ಶಾಸಕ ರಮೇಶ ಜಾರಕಿಹೊಳಿ ಮಾತನಾಡಿ, ಈ ಚುನಾವಣೆ ಭಾರತದ ಚುನಾವಣೆ, ಲೋಕಸಭಾ ಚುನಾವಣೆ ದೇಶದ ಭದ್ರತೆ, ಆರ್ಥಿಕತೆ ಮೇಲೆ ಚುನಾವಣೆ ನಡೆಯುತ್ತದೆ. ಕಳೆದ ಬಾರಿ ದೇಶದಲ್ಲಿ ಕಾಂಗ್ರೆಸ್ ಕೇವಲ 40–45 ಸೀಟ್ ಅಷ್ಟೆ ಗೆದ್ದಿದ್ದೆ. ಈ ಬಾರಿಯು ಕಾಂಗ್ರೆಸ್ 50 ಸಿಟು ಗೆದ್ದರೆ ಅದೆ ಹೆಚ್ಚು. ಮೋದಿಯವರು ಭಾರತದ ನಾಯಕ ಅಷ್ಟೆ ಅಲ್ಲದೆ ಜಗತ್ತಿನ ನಾಯಕ, ಇಂದಿರಾ ಗಾಂಧಿ, ರಾಜೀವ್ ಗಾಂಧಿ ಸಮಯದಲ್ಲಿ ಇದ್ದ ಕಾಂಗ್ರೆಸ್ ಈಗ ಉಳಿದಿಲ್ಲ. ಈಗಿನ ಕಾಂಗ್ರೆಸ್ ಪಕ್ಷಕ್ಕೆ ಭವಿಷ್ಯನೂ ಇಲ್ಲ ನಾಯಕನೂ ಇಲ್ಲ. ಹಾಗಾಗಿ ಜಗದೀಶ್ ಶೆಟ್ಟರ್ ಅವರಿಗೆ ಎಲ್ಲರೂ ಮತ ನೀಡಬೇಕು. ಜಗದೀಶ ಶೆಟ್ಟರ್ ಗೆದ್ದರೆ ಕೇಂದ್ರ ಮಂತ್ರಿ ಆಗುತ್ತಾರೆ ಎಂದು ರಮೇಶ್ ಜಾರಕಿಹೊಳಿ ಅವರು ತಿಳಿಸಿದರು.ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಮಾತನಾಡಿ, ಈ ಚುನಾವಣೆ ಬಹಳ ತುರಸಿನ ಚುನಾವಣೆ ಆಗಿದೆ. ಮೋದಿ ಅಭಿಮಾನಿಗಳು ಬೆಳಗಾವಿಯಲ್ಲಿ ಈ ಭಾಗದಿಂದ ಬಂದು ರವಿವಾರ ನಡೆದ ಕಾರ್ಯಕ್ರಮ ಯಶಸ್ವಿ ಮಾಡಿದ್ದೀರಿ. ಬೆಳಗಾವಿಯಲ್ಲಿ ಮೋದಿ ಕಾರ್ಯಕ್ರಮ ಆದ ಮೇಲೆ ಕಾಂಗ್ರೆಸ್ ಗೆ ನಡುಕ ಶುರು ಆಗಿದೆ. ದೇಶದ ಸಂರಕ್ಷಣೆ, ದೇಶವನ್ನು ಬಲ ಪಡಿಸಲು ಮೋದಿ ನಾಯಕತ್ವ ಬೇಕು. ಮೋದಿಯವರು 10 ವರ್ಷದ ಆಡಳಿತದಲ್ಲಿ ಭ್ರಷ್ಟಾಚಾರ ಇಲ್ಲದೆ ಆಡಳಿತ ಮಾಡಿದ್ದಾರೆ. ಆದರೆ ಕಾಂಗ್ರೆಸ್ ನವರು ಮೊಸರಲ್ಲಿ ಕಲ್ಲು ಹುಡುಕುತ್ತಿದ್ದಾರೆ. ಬೆಳಗ್ಗೆಯಿಂದ ಸಾಂಯಕಾಲದ ವರೆಗೆ ಮೋದಿಯವರನ್ನು ಟಿಕಿಸುತ್ತಾರೆ ಎಂದು ತಿಳಿಸಿದರು. ಮೋದಿಯವರ ಅವಧಿಯಲ್ಲಿ ಪ್ರತಿ ಸಮುದಾದ ಪ್ರಗತಿ ಆಗಿದೆ. 14 ನೇ ಸ್ಥಾನದಲ್ಲಿ ಇದ್ದ ದೇಶದ ಆರ್ಥಿಕತೆ 5ನೇ ಸ್ಥಾನಕ್ಕೆ ಬಂದಿದೆ. ಇನ್ನೂ ಕೆಲವೇ ವರ್ಷದಲ್ಲಿ ದೇಶದ ಆರ್ಥಿಕತೆ ಲೊದಲ ಸ್ಥಾನಕ್ಕೆ ಬರಲಿದೆ. ಅಮೇರಿಕಾ, ರಷ್ಯಾ, ಇಂಗ್ಲೆಂಡ್ ಅಂತಹ ದೇಶಗಳು ಮೋದಿಯವರ ಸಲಹೆಗಳು ತೆಗೆದುಕೊಳ್ಳುತ್ತಾರೆ. ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಕಾನೂನು ಸುವ್ಯಸ್ಥೆ ಹಾಳಾಗಿದೆ. ಗದಗನಲ್ಲಿ ನಾಲ್ಕು ಜನರ ಹತ್ಯೆ ಆಯ್ತು, ಬೆಂಗಳೂರಿನ ರಾಮೇಶ್ವರ ಕೆಫೆ ಬಾಂಬ್ ಬ್ಲಾಸ್ಟ್ ಆಗಿದೆ. ನೇಹ ಹತ್ಯೆ ಆಗಿದೆ. ಆದರೂ ಕಾಂಗ್ರೆಸ್ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಹೇಳಿದರು.ದಿ. ಸುರೇಶ್ ಅಂಗಡಿಯವರ ಸಮಯದಲ್ಲಿ ಸಾಕಷ್ಟು ದೇವಸ್ಥಾನಗಳ ಅಭಿವೃದ್ಧಿಗೆ ಹಣ ನೀಡಿದ್ದಾರೆ. ಬೆಳಗಾವಿ ಸ್ಮಾರ್ಟ ಸಿಟಿ, ಸಾಕಷ್ಟು ರೈಲ್ವೆಗಳ ಅಭಿವೃದ್ಧಿ ಮಾಡಿದ್ದಾರೆ. ಆದರೆ ಕಾಂಗ್ರೆಸ್ ಸರ್ಕಾರದಲ್ಲಿ ಯಾವುದೇ ಅಭಿವೃದ್ಧಿ ಆಗಿಲ್ಲ. ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಬೇಕು. ಹಾಗಾಗಿ ನನಗೆ ಅವಕಾಶ ನೀಡಬೇಕು. ಬೆಳಗಾವಿ ಜೊತೆ ನನಗೆ 30 ವರ್ಷದ ನಂಟು ಇದೆ. ರೈತರ ಸಮಸ್ಯೆಗಳು ನನಗೆ ಗೊತ್ತಿದೆ. ನಾನು ಸ್ಪೀಕರ್ ಇದ್ದಾಗ ಸುವರ್ಣಸೌದದ ಕಾಮಗಾರಿಗೆ ಚಾಲನೆ ನೀಡಿದೆ. ಬಳಿಕ ಸಿಎಂ ಇದ್ದಾಗ ಸುವರ್ಣಸೌಧ ಉದ್ಘಾನೆ ಮಾಡಿದ್ದೇನೆ ಎಂದು ತಿಳಿಸಿದರು.ನಾನು 6 ಸಲ ಶಾಸಕನಾಗಿ ಸಾಕಷ್ಟು ಅಭಿವೃದ್ಧಿ ಮಾಡಿದ್ದೇನೆ. ಅದೇ ರೀತಿ ಲೋಕಸಭೆಗೆ ಆಯ್ಕೆ ಆಗಿ ಹೊಸ ಮೇಲೆ ಜಿಲ್ಲೆಯ ಸಾಕಷ್ಟು ಆಭಿವೃದ್ಧಿ ಮಾಡುತ್ತೇನೆ. ರಮೇಶ ಜಾರಕಿಹೊಳಿ ಜೊತೆ ಸೇರಿ ಗೋಕಾಕ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಮಾಡಬೇಕು ಎಂದು ತಿಳಿಸಿದರು.ಮಾಜಿ ವಿಧಾನ ಪರಿಷತ್ ಸದಸ್ಯ ಮಾಹಾಂತೇಶ ಕವಟಗಿಮಠ ಅವರು ಮಾತನಾಡಿ, ಈ ಚುನಾವಣೆ ಒಂದು ಐತಿಹಾಸಿಕ ಚುನಾವಣೆ ಆಗಿದೆ. ಆರು ಸಲ ಶಾಸಕರಾಗಿ, ಸಿಎಂ ಆಗಿ, ಸಚಿವರಾಗಿ ವಿಧಾನ ಸಭೆ ಸ್ಪೀಕರ್ ಆಗಿ ಅನುಭವ ಇರುವ ವ್ಯಕ್ತಿ ಜಗದೀಶ್ ಶೆಟ್ಟರ್ ಅವರು ಒಂದು ಕಡೆ ಆದರೆ, ಕಾಂಗ್ರೆಸ್ ಅಭ್ಯರ್ಥಿಗೆ ಅನುಭ ಏನೂ.? ಮೋದಿಯವರುಕೋವಿಡ್ ಅನ್ನೊ ಮಹಾಮಾರಿ ಸಮರ್ಥವಾಗಿ ನಿಭಾಯಿಸಿದ್ದಾರೆ. ಆದರೆ ಈ ಹಿಂದೆ ಕಾಲರಾ ಬಂದಾಗ ಕೋಟ್ಯಾಂತರ ಜನ ಸಾವನ್ನಪ್ಪಿದ್ದಾರೆ. ರಮೇಶ ಜಾರಕಿಹೊಳಿ ಅವರು ನಿರಾವರಿ ಸಚಿವರಾಗಿದ್ದಾಗ ಈ ಭಾಗದಲ್ಲಿ ಸಾಕಷ್ಟು ಅಭಿವೃದ್ಧಿ ಆಗಿದೆ. ಹಾಗಾಗಿ ರಮೇಶ ಜಾರಕಿಹೊಳಿ ನಾಯಕತ್ವದಲ್ಲಿ ಜಗದೀಶ್ ಶೆಟ್ಟರ್ ಅವರು ಗೆಲ್ಲಬೇಕು ಎಂದರು. ಬಿಜೆಪಿ ಸೇರಿದ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿ ತತ್ವಗಳು ಹಾಗೂ ಪ್ರಧಾನಿ ನರೇಂದ್ರ ಮೋದಿಯವರ ನಾಯಕ್ವ ಒಪ್ಪಿಕೊಂಡು ಕಾಂಗ್ರೆಸ್ ತೊರೆದು ನೂರಾರು ಯುವಕರು ಬಿಜೆಪಿ ಪಕ್ಷ ಸೇರಿಕೊಂಡರು. ಪಕ್ಷ ಸೇರಿದ ಯುವಕರು ಶಾಸಕ ರಮೇಶ ಜಾರಕಿಹೊಳಿ ಹಾಗೂ ಜಗದೀಶ ಶೆಟ್ಟರ್ ಗೆ ಸನ್ಮಾನ ಮಾಡಿದರು.ಈ ವೇಳೆ ಮಾಜಿ ಶಾಸಕ ಎಂ. ಎಲ್ ಮತ್ತೇಣ್ಣವರ, ಬಿಜೆಪಿ ಗ್ರಾಮೀಣ ಜಿಲ್ಲಾಧ್ಯಕ್ಷ ಶುಭಾಸ ಪಾಟೀಲ್, ಮಂಡಳ ಅಧ್ಯಕ್ಷ ರಾಜೇಂದ್ರ ಗೌಡಾಪ್ಪಗೋಳ ಸೇರಿದಂತೆ ಸಾವಿರಾರು ಕಾರ್ಯಕರ್ತರು ಉಪಸ್ಥಿತರಿದ್ದರು

# ರಾಜ್ಯ ಕಾಂಗ್ರೆಸ್ ಸರ್ಕಾರವು ನುಡಿದಂತೆ ನಡೆದಿದೆ. ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದೆ



ಸವದತ್ತಿ : ಸಮೀಪದ ಇನಾಮ್ ಹೊಂಗಲದ ಸಿದ್ಧಲಿಂಗೇಶ್ವರ ಪ್ರೌಢಶಾಲಾ ಮೈದಾನದ ಆವರಣದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಮಾತನಾಡಿ ಶಾಸಕ ವಿಶ್ವಾಸ ವೈದ್ಯ ದೇಶಾದ್ಯಂತ ಬಿಜೆಪಿ ವಿರೋಧಿ ಅಲೆಯಿದ್ದು, ಕಾಂಗ್ರೆಸ್ ಪಕ್ಷಕ್ಕೆ ದೊಡ್ಡ ಜಯವಾಗಲಿದೆ ಎಂದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರವು ನುಡಿದಂತೆ ನಡೆದಿದೆ. ಐದು ಗ್ಯಾರೆಂಟಿಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಿದೆ ಎಂದು ತಿಳಿಸಿದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ ಗೆಲುವಿಗೆ ಕಾಂಗ್ರೆಸ್ ಕಾರ್ಯಕರ್ತರು ಒಗ್ಗಟ್ಟಿನಿಂದ ಶ್ರಮಿಸಬೇಕು. ವಿಧಾನ ಪರಿಷತ್, ಸ್ಥಳೀಯ ಸಂಸ್ಥೆ, ಪದವೀಧರರ ಕ್ಷೇತ್ರ, ವಿಧಾನಸಭೆ ಚುನಾವಣೆಯಲ್ಲಿ ಒಗ್ಗಟ್ಟಿನಿಂದ ದುಡಿದು ಕಾಂಗ್ರೆಸ್ ಪಕ್ಷ ಗೆಲವಿಗೆ ಶ್ರಮಿಸಿದ ರೀತಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ ಪರ ಮತ ಯಾಚಿಸಲಾಯಿತು.ಈ ಸಂದರ್ಭದಲ್ಲಿ ಸಚಿವರಾದ ಡಾ.ಎಂ.ಸಿ. ಸುಧಾಕರ, ಬಸಯ್ಯ ಹಿರೇಮಠ, ಸಂಗಪ್ಪ ಲಕ್ಕಣ್ಣವರ, ಎಸ್. ಎಂ. ಫಕೀರಶೆಟ್ಟಿ, ರಾಮಣ್ಣ ತುರುಮರಿ, ಬಸಪ್ಪ ಅಳಗವಾಡಿ, ಕಿಟ್ಟು ಪಟ್ಟಣಶೆಟ್ಟಿ, ಬಸಪ್ಪ ಕೊಪ್ಪದ, ರಮೇಶ ಬ್ಯಾಡಸೂರ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.(ವರದಿ ಈರಣ್ಣಾ ಹೂಲ್ಲೂರ)ಹೇಳಿಕೆ: ಮೃಣಾಲ್ ಗೆಲ್ಲಬೇಕು, ಬೆಳಗಾವಿ ಬೆಳೆಯಬೇಕು.ಕಾಂಗ್ರೆಸ್ ಬರಲಿದೆ ಪ್ರಗತಿ ತರಲಿದೆ ನುಡಿದಂತೆ ನಡೆದ ಸರಕಾರ ಕಾಂಗ್ರೆಸ್ ಸರ್ಕಾರ ಬಿಜೆಪಿ ಸುಳಿನ ಮಾರ್ಕೆಟ್ ಇದ್ದಂತೆ ಜನರನ್ನು ಹಿಂದೂತ್ವದ ಹೆಸರಿನಲ್ಲಿ ದಾರಿತಪ್ಪಿಸುವ ಕೆಲಸ ಮಾಡುತ್ತಿದೆ.ಲಕ್ಷ್ಮೀ ಹೆಬ್ಬಾಳಕರ, ಸಚಿವರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕರ್ನಾಟಕ ಸರ್ಕಾರ